**ದಿನಾಂಕ: 17-12-2022 ರಂದು ಬೆಳಗ್ಗೆ 11:00 ಗಂಟೆಗೆ ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ಗಣೇಶ ಮಂದಿರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ಯತೀಶ್. ಎ. ಜೆ – ನೋಡೆಲ್ ಅಧಿಕಾರಿ ಮತ್ತು ಸ.ಕಾ.ನಿ.ಅ (ಬನಶಂಕರಿ) ಉಪವಿಭಾಗ
2. ಶ್ರೀ. ಮೋಹಿತ್. ಆರ್ – ಸಹಾಯಕ ಅಭಿಯಂತರರು (ಕಿಯೋನಿಕ್ಸ್)
3. ಶ್ರೀ. ಪವನ್ – ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀಮತಿ. ಕವಿತ – ಹಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ. ಹರೀಶ್ – ಅರಣ್ಯಾಧಿಕಾರಿಗಳು (ದಕ್ಷಿಣ-ವಲಯ).

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡ್ ವ್ಯಾಪ್ತಿಯಲ್ಲಿ ಮಳೆಯಿಂದಾಗಿ ಉಂಟಾಗುತ್ತಿರುವ ರಸ್ತೆಗುಂಡಿಗಳನ್ನು ಆಗಿಂದಾಗ್ಗೆ ಮುಚ್ಚಲಾಗುತ್ತಿರುತ್ತದೆ ಎಂದು ಸಹಾಯಕ ಅಭಿಯಂತರರು ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಕಾಮಗಾರಿಗಳು ಪ್ರಾರಂಭಗೊಂಡಿದ್ದು ಪ್ರಸ್ತುತ ಬನಶಂಕರಿ 2ನೇ ಹಂತದ ವ್ಯಾಪ್ತಿಯಲ್ಲಿ ರಸ್ತೆ ಡಾಂಬರೀಕರಣ ಕಾಮಗಾರಿಯು ಹಾಗೂ ಚರಂಡಿಗಳ ಅಭಿವೃದ್ಧಿ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ ಎಂದು ಸಹಾಯಕ ಅಭಿಯಂತರರು ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿರುವ 21ನೇ ಮುಖ್ಯರಸ್ತೆಯಲ್ಲಿರುವ ಗಲ್ಲಿ ಕಿಚನ್ ಹೋಟೆಲ್ ನವರು ಹೋಟೆಲ್ ಮುಂಭಾಗದ ರಸ್ತೆಯಲ್ಲಿ ಗಲ್ಲಿ ಕಿಚನ್ ವಾಹನವನ್ನು ನಿಲ್ಲಿಸಲಾಗಿರುತ್ತದೆ. ಅದರಿಂದ ಸದರಿ ಸ್ಥಳದಲ್ಲಿ ಸ್ವಚ್ಚಗೊಳಿಸಲು ಸಾಧ್ಯವಾಗುತ್ತಿರುವುದಿಲ್ಲ ಎಂದು ಹಿಂದಿನ ಸಭೆಯಲ್ಲಿ ತಿಳಿಸಿದ್ದರು. ಅದರಂತೆ ಸದರಿ ವಾಹನವನ್ನು ತೆರವುಗೊಳಿಸಿ ರಸ್ತೆಯನ್ನು ಸವಚ್ಚಗೊಳಿಸಲಾಗಿರುತ್ತದೆ ಎಂದು ಕಿರಿಯ ಆರೋಗ್ಯ ಪರಿವಿಕ್ಷಕರು ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಸ್ವಚ್ಚತೆ ಹಾಗೂ ಘನತ್ಯಾಜ್ಯ ವಿಲೇವಾರಿ ಕಾರ್ಯವು ಸಮರ್ಪಕವಾಗಿ ನಿರ್ವಹಿಸಲಾಗುತ್ತಿರುತ್ತದೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಸಿಲ್ಟ್ ಅಂಡ್ ಟ್ರಾಕ್ಟರ್ ಉಪಯೋಗಿಸಿ ಚರಂಡಿಗಳಲ್ಲಿ ಹೂಳು ತೆಗೆಯುವುದು, ಡೆಬ್ರಿಸ್ ತೆಗೆಯುವುದು ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತಿರುತ್ತದೆ ಎಂದು ಸಹಾಯಕ ಅಭಿಯಂತರರು ತಿಳಿಸಿದರು.

ಪು.ತಿ.ನೋ

ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ರಲ್ಲಿನ ಎಲ್ಲಾ ಭಾಗಗಳಲ್ಲಿ ಘನತ್ಯಾಜ್ಯ ವಿಲೇವಾರಿ ಕಾರ್ಯ, ಸಿವಿಲ್ ಕಾಮಗಾರಿಗಳು ಹಾಗೂ ಇನ್ನಿತರೆ ಕೆಲಸ ಕಾರ್ಯಗಳು ಸಮರ್ಪಕವಾಗಿ ನಡೆಯುತ್ತಿರುತ್ತದೆ ಎಂದು ಸಮಿತಿ ಸದಸ್ಯರು ಅಭಿಪ್ರಾಯಿಸಿದರು.

ವಾರ್ಡ್ ಸಮಿತಿ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಾರ್ವಜನಿಕರಿಗೆ ವಿವರಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಶ್ರೀ. ಯತೀಶ್. ಎ. ಜೆ, ನೋಡೆಲ್ ಅಧಿಕಾರಿ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 165
ಗಣೇಶ ಮಂದಿರ